ದಿನಾಂಕ 19-11-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಪಾಟೀ ಸವಾಲು: ಪ್ರತಿವಾದಿಗಳ ಪರ ವಕೀಲರಿಂದ:**

ನಿಪಿ 1 ರ ಕರಾರು ನನ್ನ ತಂದೆಯ ಹೆಸರಿನಲ್ಲಿ ಆಗಿರುತ್ತದೆ. ಆ ಸಮಯದಲ್ಲಿ ನಾನು ಅಲ್ಪವಯಿ ಎಂದರೆ ಸರಿ. 1 ನೇ ವಾದಿ ಈ ದಾವೆಯನ್ನು ಹೂಡಲು ನನಗೆ ಯಾವುದೇ ಅಧಿಕಾರ ಪತ್ರ ನೀಡಿರುವುದಿಲ್ಲ ಎಂದರೆ ಸರಿ. ಪ್ರತಿವಾದಿಗಳಾಗಲೀ ಅಥವಾ ನಿಂಗಪ್ಪನಾಗಲೀ ದಾವಾ ಆಸ್ತಿಯನ್ನು ಮಾರಾಟ ಮಾಡಲು ಕರಾರು ಪತ್ರ ಮಾಡಿಕೊಂಡಿರುವುದಿಲ್ಲ ಹಾಗೂ ಮಾರಾಟ ಮಾಡುವ ಅವಶ್ಯಕತೆ ಇರಲಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತು 5 ನೇ ಪ್ರತಿವಾದಿಯ ಮಾಲೀಕತ್ವಕ್ಕೆ ಸೇರಿರುತ್ತದೆ ಎಂದರೆ ಸರಿಯಲ್ಲ. ವಾದಪತ್ರದಲ್ಲಿ ತೋರಿಸಿರುವ ಚಕ್ಕುಬಂದಿ ದಾವಾ ಆಸ್ತಿಯ ಚಕ್ಕುಬಂದಿ ಅಲ್ಲ ಎಂದರೆ ಸರಿಯಲ್ಲ.

2. ದಾವಾ ಆಸ್ತಿಯ ಉತಾರವನ್ನು ನಾನು ನೋಡಿರುತ್ತೇನೆ. ಸದರಿ ಉತಾರ ಮೊದಲು ನಿಂಗಪ್ಪ ಮತ್ತು ನಂತರ ಆತನ ಮಕ್ಕಳ ಹೆಸರಿನಲ್ಲಿ ಇರುತ್ತದೆ. ದಾವಾ ಆಸ್ತಿಯ ಒಟ್ಟು ವಿಸ್ತೀರ್ಣ 2 ಎಕರೆ 10 ಗುಂಟೆ ಎಂದರೆ ಸರಿ. ಸದರಿ ಒಟ್ಟು ಆಸ್ತಿಯ ಪೂರ್ವಕ್ಕೆ ಮಠ, ಪಶ್ಚಿಮಕ್ಕೆ ಬಸಪ್ಪ ನೀಲಪ್ಪ ರವರ ಜಮೀನು, ಉತ್ತರಕ್ಕೆ ಸ್ವಾಮಿ ನಿಂಗಪ್ಪ ರವರ ಜಮೀನು, ದಕ್ಷಿಣಕ್ಕೆ ಕಚ್ಚಾ ರಸ್ತೆ ಇರುತ್ತದೆ. ಈ ದಾವೆಯಲ್ಲಿ ಸಾಕ್ಷಿ ಹೇಳಲು ನನಗೆ ಯಾವುದೇ ಅಧಿಕಾರ ಇಲ್ಲ ಎಂದರೆ ಸರಿಯಲ್ಲ. ನಿಪಿ 1 ರ ದಾಖಲೆಯನ್ನು ನಿಂಗಪ್ಪ ಮತ್ತು ಆತನ ಮಕ್ಕಳು ಬರೆದುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ 1 ರಲ್ಲಿ ಹೇಳಿದಂತೆ ಮುಂಗಡ ಹಣ ಪಡೆದಿರುವ ವಿಷಯ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಕಬ್ಜಾ ಪಡೆದಿರುವ ವಿಷಯ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ.

3. ನಿಪಿ 1 ರ ಸಮಯದಲ್ಲಿ ದಾವಾ ಆಸ್ತಿಯ ಸರ್ವೆ ನಂಬರ್ ಅಸ್ತಿತ್ವದಲ್ಲಿರಲಿಲ್ಲ ಎಂದರೆ ಸರಿಯಲ್ಲ. ಕರಾರು ಪತ್ರವನ್ನು ನಾನೇ ಸೃಷ್ಟಿ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 1 ರಂತೆ ಯಾವುದೇ ಖರೀದಿ ಮಾತುಕತೆಯಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾವು

ದಾವಾ ಆಸ್ತಿಯಲ್ಲಿ ಯಾವುದೇ ಮನೆ ಕಟ್ಟಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆ ಕುರಿತು

ಯಾವುದೇ ದಾಖಲೆಗಳು ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿ ನಮ್ಮ ಕಬ್ಜಾದಲ್ಲಿದೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ನಿಪಿ 4 ರಿಂದ 13 ರ ದಾಖಲೆಗಳು ದಾವಾ ಆಸ್ತಿಗೆ ಸಂಬಂಧಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ 10 ರಿಂದ 16 ರಲ್ಲಿ ಕಾಣಿಸುವ ಮನೆ 5 ನೇ ಪ್ರತಿವಾದಿಯ ಮನೆ ಆಗಿರುತ್ತದೆ ಎಂದರೆ ಸರಿಯಲ್ಲ. ಈ ದಾವೆಯನ್ನು ಹೂಡುವ ಪೂರ್ವದಲ್ಲಿ ಪ್ರತಿವಾದಿಗಳಿಗೆ ಯಾವುದೇ ನೋಟೀಸನ್ನು ನೀಡಿರುವುದಿಲ್ಲ. ಆ ಕಾರಣ ವ್ಯಾಜ್ಯ ಕಾರಣ ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ.

4. ಸರ್ವೆ ನಂ.2/1 ಕ್ಷೇತ್ರ 2 ಎಕರೆ 20 ಗುಂಟೆ ಇರುವ ಬಗ್ಗೆ ನನಗೆ ಗೊತ್ತಿಲ್ಲ. ಈ ದಾವೆಯನ್ನು ಹೂಡುವ ಪೂರ್ವದಲ್ಲಿ 4, 5, 7 ರಿಂದ 9 ನೇ ಪ್ರತಿವಾದಿಗಳು ತಲಾ 30 ಗುಂಟೆ ಹಂಚಿಕೊಂಡಿರುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ನಿಪಿ 1 ರ ನಂತರ ಹಂಚಿಕೊಂಡಿರುವುದಾಗಿ ನುಡಿಯುತ್ತಾರೆ. ನಿಪಿ 1 ರ ಒಕ್ಕಣಿಕೆ ಪ್ರಕಾರ ನಾವು ನಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಈ ದಾವೆ ಕಾಲ ಪರಿಮಿತಿ ಮೀರಿ ಹೂಡಲಾಗಿದೆ ಎಂದರೆ ಸರಿಯಲ್ಲ. ನಿಪಿ 1 ಕಾನೂನು ಬಾಹಿರವಾಗಿದೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.